All India Radio: Bangalore
National Bulletin In Kannada
13.04.2024 : 07.35AM
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
13.04.2024 : 07.35AM
*********

ಮುಖ್ಯಾಂಶಗಳು:

1. ಲೋಕಸಭಾ ಚುನಾವಣೆ; ೮೫ ವರ್ಷ ಮೇಲ್ಪಟ ಹಿರಿಯ ನಾಗರಿಕರು ಮತ್ತು ದಿವ್ಯಾಂಗರಿಗೆ ಇಂದಿನಿಂದ ಇದೇ ೧೮ರ ವರೆಗೆ ಮನೆಯಿಂದಲೇ ಮತದಾನಕ್ಕೆ ಅವಕಾಶ.
2. ಮೊದಲ ಹಂತದ ಸಾರ್ವತ್ರಿಕ ಚುನಾವಣೆಗೆ ಬಿರುಸಿನ ಪ್ರಚಾರ; ರಾಜಸ್ಥಾನದಲ್ಲಿ ಪ್ರಧಾನಿ ನರೇಂದ್ರ ಮೋದಿ; ತಿರುನಲ್ವೇಲಿಯಲ್ಲಿ ರಾಹುಲ್ ಗಾಂಧಿ ಸಾರ್ವಜನಿಕ ರ್‍ಯಾಲಿಯಲ್ಲಿ ಭಾಗಿ.
3. ಕರ್ನಾಟಕದ ಬೆಂಗಳೂರಿನಲ್ಲಿ ರಾಮೇಶ್ವರಂ ಕೆಫೆ ಬಾಂಬ್ ಸ್ಫೋಟ ಪ್ರಕರಣ; ಬಂಧಿತ ಇಬ್ಬರನ್ನು ಪೊಲೀಸ್ ವಶಕ್ಕೆ ನೀಡಿದ ಎನ್‌ಐಎ ವಿಶೇಷ ನ್ಯಾಯಾಲಯ
4. ಐಪಿಎಲ್ ಟಿ-೨೦ ಕ್ರಿಕೆಟ್; ಲಖನೌ ಸೂಪರ್ ಜೈಂಟ್ಸ್ ವಿರುದ್ಧ ಡೆಲ್ಲಿ ಕ್ಯಾಪಿಟಲ್ಸ್ ತಂಡಕ್ಕೆ ೬ ವಿಕೆಟ್‌ಗಳ ಜಯ

******

ಮುಂಬರುವ ಲೋಕಸಭಾ ಚುನಾವಣೆಗಾಗಿ ಹಿರಿಯ ನಾಗರಿಕರು ಮತ್ತು ದಿವ್ಯಾಂಗರಿಗೆ ಮನೆಯಿಂದಲೇ ಮತದಾನ ಮಾಡುವ ಸೌಲಭ್ಯವನ್ನು ಚುನಾವಣಾ ಆಯೋಗ ಒದಗಿಸಿದೆ. ಈ ಉಪಕ್ರಮದಡಿ ೮೫ ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು ಮತ್ತು ಶೇಕಡ ೪೦ ಕ್ಕಿಂತ ಹೆಚ್ಚಿನ ವೈಕಲ್ಯತೆ ಇರುವ ದಿವ್ಯಾಂಗರು, ಮನೆಯಿಂದಲೇ ಮತದಾನ ಮಾಡುವ ಸೌಲಭ್ಯ ಪಡೆಯಬಹುದು. ಮೊದಲ ಮತ್ತು ಎರಡನೇ ಹಂತದ ಮತದಾನಗಳಿಗಾಗಿ ಈ ವರ್ಗದ ಜನರು ಈಗಾಗಲೇ ಮತದಾನ ಪ್ರಕ್ರಿಯೆ ಆರಂಭಿಸಿದ್ದಾರೆ ಎಂದು ಚುನಾವಣಾ ಆಯೋಗ ತಿಳಿಸಿದೆ. ಇಂದಿನಿಂದ ಇದೇ ೧೮ರ ವರೆಗೆ ಮನೆಯಿಂದಲೇ ಮತದಾನ ಮಾಡುವ ಪ್ರಕ್ರಿಯೆಯಲ್ಲಿ ಭದ್ರತಾ ಸಿಬ್ಬಂದಿಯ ಪಾಲ್ಗೊಳ್ಳುವಿಕೆ ಇರಲಿದ್ದು, ಗೌಪ್ಯತೆ ಕಾಪಾಡಲಾಗುವುದು ಎಂದು ಆಯೋಗ ಹೇಳಿದೆ. ದೇಶಾದ್ಯಂತ ೮೫ ವರ್ಷ ಮೇಲ್ಪಟ್ಟ ೮೧ ಲಕ್ಷ ಮತದಾರರು ಹಾಗೂ ೯೦ ಲಕ್ಷ ದಿವ್ಯಾಂಗ ಮತದಾರರು ಈ ಸೌಲಭ್ಯಕ್ಕಾಗಿ ನೋಂದಾಯಿಸಿಕೊಂಡಿದ್ದಾರೆ. ಮನೆಯಲ್ಲೇ ಮತದಾನ ಮಾಡಲು ಇಚ್ಛಿಸುವವರಿಗೆ ೧೨ಡಿ ನಮೂನೆ ವಿತರಿಸಲಾಗಿತ್ತು.

******

ಮೊದಲ ಹಂತದ ಲೋಕಸಭಾ ಚುನಾವಣೆಗೆ ನಾನಾ ರಾಜಕೀಯ ಪಕ್ಷಗಳ ಪ್ರಮುಖ ನಾಯಕರು ಬಿರುಸಿನ ಪ್ರಚಾರದಲ್ಲಿ ತೊಡಗಿದ್ದಾರೆ. ಬಿಜೆಪಿ ಹಿರಿಯ ನಾಯಕರೂ ಆದ ಪ್ರಧಾನಿ ನರೇಂದ್ರ ಮೋದಿ ನಿನ್ನೆ ರಾಜಸ್ಥಾನದ ಬಾರ್ಮರ್‌ನಲ್ಲಿ ಚುನಾವಣಾ ರ್‍ಯಾಲಿಯಲ್ಲಿ ಪಾಲ್ಗೊಂಡಿದ್ದರು. ಈ ಸಂದರ್ಭದಲ್ಲಿ ಅವರು, ಸಂವಿಧಾನದ ಹೆಸರಿನಲ್ಲಿ ಕಾಂಗ್ರೆಸ್ ಪಕ್ಷ ಸುಳ್ಳು ಹೇಳಿಕೆಗಳನ್ನು ನೀಡುತ್ತಿದೆ. ದಶಕಗಳಿಂದಲೂ ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ಪಂಗಡಗಳನ್ನು ನಿರ್ಲಕ್ಷಿಸುತ್ತಾ ಬಂದಿದೆ ಎಂದು

ಟೀಕಿಸಿದರು. ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಇಂದು ಬಾಂದರಾ-ಗೊಂಡಿಯಾ ಲೋಕಸಭಾ ಕ್ಷೇತ್ರದಲ್ಲಿ ಪಕ್ಷದ ಅಭ್ಯರ್ಥಿ ಪರ ಸಾರ್ವಜನಿಕ ರ್‍ಯಾಲಿಯಲ್ಲಿ ಪಾಲ್ಗೊಳ್ಳಲಿದ್ದಾರೆ. ಕಾಂಗ್ರೆಸ್ ಪಕ್ಷದ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ನಾಳೆ ನಾಗ್ಪುರದ ಛಂಬಾಲ ಚೌಕ್‌ನಲ್ಲಿ ಚುನಾವಣಾ ರ್‍ಯಾಲಿ ಉದ್ದೇಶಿಸಿ ಭಾಷಣ ಮಾಡಲಿದ್ದಾರೆ. ರಾಹುಲ್ ಗಾಂಧಿ ನಿನ್ನೆ ತಿರುನಲ್ವೇಲಿಯಲ್ಲಿ ಸಾರ್ವಜನಿಕ ಸಮಾರಂಭದಲ್ಲಿ ಮಾತನಾಡಿ, ಎನ್‌ಡಿಎ ಸರ್ಕಾರ ಕೇವಲ ಶ್ರೀಮಂತ ಕೈಗಾರಿಕೋದ್ಯಮಿಗಳಿಗೆ ಕೇಂದ್ರೀಕೃತವಾಗಿದೆ. ಪ್ರತಿಪಕ್ಷಗಳನ್ನು ಗುರಿಯಾಗಿರಿಸಿಕೊಂಡು ಇಡಿ, ಸಿಬಿಐ ಮತ್ತು ಐಟಿಗಳನ್ನು ಬಳಸಿಕೊಳ್ಳುತ್ತಿದೆ ಎಂದು ಟೀಕಿಸಿದರು.

******

ತಮಿಳುನಾಡಿನಿಂದ ಡಿಎಂಕೆ ಮತ್ತು ಎಐಎಡಿಎಂಕೆಯನ್ನು ನಿರ್ಮೂಲನೆ ಮಾಡಬೇಕೆಂದು ಬಿಜೆಪಿಯ ಹಿರಿಯ ನಾಯಕ ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಮತದಾರರಿಗೆ ಕರೆ ನೀಡಿದ್ದಾರೆ. ಮಧುರೈನಲ್ಲಿ ನಿನ್ನೆ ನಡೆದ ರೋಡ್ ಶೋನಲ್ಲಿ ಬಿಜೆಪಿ ಲೋಕಸಭಾ ಅಭ್ಯರ್ಥಿಗಳ ಪರವಾಗಿ ಮತಯಾಚಿಸಿ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಅವರು ಯಾವಾಗಲೂ ಬೆಳವಣಿಗೆ ಮತ್ತು ಅಭಿವೃದ್ಧಿಯ ಉದ್ದೇಶವನ್ನು ಹೊಂದಿದ್ದಾರೆ ಎಂದು ಹೇಳಿದರು. ಎನ್‌ಡಿಎ ಸರಕಾರ ಯಾವಾಗಲೂ ಪ್ರಾಚೀನ ತಮಿಳು ಭಾಷೆಯನ್ನು ಜಾಗತಿಕ ಮಟ್ಟದಲ್ಲಿ ಪ್ರಚಾರ ಮಾಡುತ್ತಿದೆ. ಅಂತೆಯೇ ತಮಿಳುನಾಡಿನ ಜನರು ಬಿಜೆಪಿಗೆ ಮತ ಹಾಕುವ ಉತ್ಸುಕತೆಯಲ್ಲಿದ್ದಾರೆ ಎಂದು ಅಮಿತ್ ಶಾ ಹೇಳಿದರು.

******

ಮೂರನೇ ಹಂತದ ಲೋಕಸಭಾ ಚುನಾವಣೆಗೆ ನಿನ್ನೆ ಅಧಿಸೂಚನೆ ಪ್ರಕಟವಾಗಿದ್ದು, ಈ ಹಂತದಲ್ಲಿ ನಾಮಪತ್ರ ಸಲ್ಲಿಕೆಯ ಮೊದಲ ದಿನ ದೇಶದಲ್ಲೆಡೆ ಅನೇಕ ಅಭ್ಯರ್ಥಿಗಳು ಉಮೇದುವಾರಿಕೆ ಸಲ್ಲಿಸಿದ್ದಾರೆ. ಈ ಮೂರನೇ ಹಂತದಲ್ಲಿ ೧೦ ರಾಜ್ಯಗಳು ಮತ್ತು ಎರಡು ಕೇಂದ್ರಾಡಳಿತ ಪ್ರದೇಶಗಳ ೯೪ ಲೋಕಸಭಾ ಕ್ಷೇತ್ರಗಳಿಗೆ ಮೇ ೭ರಂದು ಮತದಾನ ನಡೆಯಲಿದೆ. ಈ ತಿಂಗಳ ೧೯ರ ವರೆಗೆ ನಾಮಪತ್ರ ಸಲ್ಲಿಕೆಗೆ ಅವಕಾಶವಿದ್ದು, ಮರುದಿನ ನಾಮಪತ್ರಗಳ ಪರಿಶೀಲನೆ ನಡೆಯಲಿದೆ. ಉಮೇದುವಾರಿಕೆ ಹಿಂಪಡೆಯಲು ಇದೇ ೨೨ ಕೊನೆ ದಿನವಾಗಿದೆ. ಕರ್ನಾಟಕದಲ್ಲಿ ಎರಡನೇ ಹಂತದ ಚುನಾವಣೆ ಇದಾಗಿದ್ದು, ೧೪ ಸ್ಥಾನಗಳಿಗೆ ಅಧಿಸೂಚನೆ ಪ್ರಕಟವಾಗುತ್ತಿದ್ದಂತೆ ರಾಜ್ಯದ ಹಲವೆಡೆ ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದಾರೆ. ಮೊದಲ ದಿನ ವಿವಿಧ ಪ್ರಮುಖ ರಾಜಕೀಯ ಪಕ್ಷಗಳ ಮತ್ತು ಪಕ್ಷೇತರ ಅಭ್ಯರ್ಥಿಗಳು ಸೇರಿದಂತೆ ಒಟ್ಟು ೫೭ ನಾಮಪತ್ರಗಳು ಸಲ್ಲಿಕೆಯಾಗಿವೆ. ಇದರಲ್ಲಿ ೫೧ ಮಂದಿ ಪುರುಷರು ಹಾಗೂ ೬ ಮಹಿಳೆಯರು ನಾಮಪತ್ರ ಸಲ್ಲಿಸಿದ್ದಾರೆ.

******

ಚುನಾವಣಾ ಆಯೋಗವು ನಿನ್ನೆ ಮೊದಲ ಹಂತದ ಲೋಕಸಭಾ ಚುನಾವಣೆಯ ಸಿದ್ಧತೆಗಳನ್ನು ಪರಿಶೀಲಿಸಿತು. ಆಯೋಗವು ದೇಶಾದ್ಯಂತ ಸುಮಾರು ೩೫೦ ಚುನಾವಣಾ ವೀಕ್ಷಕರೊಂದಿಗೆ ಸಂವಾದ ನಡೆಸಿತು. ಈ ತಿಂಗಳ ೧೯ ರಂದು ೨೧ ರಾಜ್ಯಗಳಲ್ಲಿನ ೧೦೨ ಲೋಕಸಭಾ ಕ್ಷೇತ್ರಗಳಿಗೆ ಮೊದಲ ಹಂತದ ಚುನಾವಣೆ ನಡೆಯಲಿದೆ. ಮುಕ್ತ ಮತ್ತು ನ್ಯಾಯಸಮ್ಮತ ಮತದಾನ ಖಚಿತ ಪಡಿಸಿಕೊಳ್ಳಲು ೧೨೭ ಸಾಧಾರಣ, ೬೭ ಪೊಲೀಸ್ ಹಾಗೂ ೧೬೭ ವೆಚ್ಚ ವೀಕ್ಷಕರನ್ನು ನಿಯೋಜಿಸಲಾಗಿದೆ.

******

ಬೈಸಾಖಿ, ವಿಶು, ಬಿಶುಭ್, ಬಹಾಗ್ ಬಿಹು, ಪೋಯಿಲ್ಲಾ ಬೊಯ್ಶಾಖ್, ವೈಶಾಖಾಡಿ ಮತ್ತು ಪುತಾಂಡು ಹಬ್ಬಗಳ ಮುನ್ನಾದಿನವಾದ ನಿನ್ನೆ ರಾಷ್ಟ್ರಪತಿ ದ್ರೌಪದಿ ಮುರ್ಮು ರಾಷ್ಟ್ರದ ಜನತೆಗೆ ಶುಭಾಶಯ ಕೋರಿದ್ದಾರೆ. ಈ ಹಬ್ಬಗಳನ್ನು ಇಂದು ಮತ್ತು ನಾಳೆ ಆಚರಿಸಲಾಗುತ್ತದೆ. ತಮ್ಮ ಸಂದೇಶದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು, ದೇಶಾದ್ಯಂತ ರೈತ ಸಮುದಾಯದ ಕಠಿಣ ಪರಿಶ್ರಮಕ್ಕೆ ಕೃತಜ್ಞತೆ ವ್ಯಕ್ತಪಡಿಸಿ, ಈ ಹಬ್ಬಗಳು ಪ್ರತಿಯೊಬ್ಬರ ಬಾಳಿನಲ್ಲಿ ಸಮೃದ್ಧಿ ಮತ್ತು ಶಾಂತಿ ತರಲಿ ಎಂದು ಹಾರೈಸಿದ್ದಾರೆ. ಉಪರಾಷ್ಟ್ರಪತಿ ಜಗದೀಪ್ ಧನಕರ್, ಜನತೆಗೆ ಹಬ್ಬಗಳ ಶುಭಾಶಯ ಕೋರಿದ್ದಾರೆ. ಭಾರತದ ನಾಗರಿಕತೆಯ ನೀತಿಯನ್ನು ವ್ಯಾಖ್ಯಾನಿಸುವ, ವೈವಿಧ್ಯತೆಯಲ್ಲಿ ಏಕತೆಯ ಮನೋಭಾವಕ್ಕೆ ಬದ್ಧತೆಯನ್ನು ಅವರು ಪುನರುಚ್ಚರಿಸಿದ್ದಾರೆ.

******

ಕರ್ನಾಟಕ ರಾಜಧಾನಿ ಬೆಂಗಳೂರಿನಲ್ಲಿ ಸಂಭವಿಸಿದ್ದ ರಾಮೇಶ್ವರಂ ಕೆಫೆ ಬಾಂಬ್ ಸ್ಫೋಟ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಷ್ಟ್ರೀಯ ತನಿಖಾ ಸಂಸ್ಥೆ-ಎನ್‌ಐಎ, ನಿನ್ನೆ ಪಶ್ಚಿಮ ಬಂಗಾಳದ ಪೂರ್ವ ಮೇದಿನಿಪುರ ಜಿಲ್ಲೆಯಲ್ಲಿ ಬಂಧಿಸಿದ ಇಬ್ಬರು ವ್ಯಕ್ತಿಗಳನ್ನು ಕೋಲ್ಕತಾದ ಎನ್‌ಐಎ ವಿಶೇಷ ನ್ಯಾಯಾಲಯವು ಮೂರು ದಿನಗಳ ಪೊಲೀಸ್ ವಶಕ್ಕೆ ಒಪ್ಪಿಸಿದೆ. ಮೊಸಾವಿರ್ ಹೊಸೈನ್ ಸಾಜಿಬ್ ಮತ್ತು ಅಬ್ದುಲ್ ಮಥೀನ್ ಅಹ್ಮದ್ ತಾಹಾ ಅವರನ್ನು ನಿನ್ನೆ ಎನ್‌ಐಎ ಬಂಧಿಸಿತ್ತು. ತಡರಾತ್ರಿ ಈ ಇಬ್ಬರನ್ನು ಬೆಂಗಳೂರಿಗೆ ಕರೆತರಲಾಗಿದ್ದು, ಇಂದು ನ್ಯಾಯಾಧೀಶರ ಎದುರು ಹಾಜರುಪಡಿಸಲಾಗುತ್ತದೆ. ಪುರ್ಬಾ ಮೇದಿನಿಪುರ ಜಿಲ್ಲೆಯ ನ್ಯೂ ದಿಘಾದಲ್ಲಿರುವ ಹೋಟೆಲ್‌ನಿಂದ ಈ ಇಬ್ಬರನ್ನು ಬಂಧಿಸಲಾಗಿದೆ. ಅವರು ಈ ಹಿಂದೆ ಕೋಲ್ಕತ್ತಾದ ಲೆನಿನ್ ಸರನಿ ಮತ್ತು ಎಸ್ಪಲನಾಡೆ ಪ್ರದೇಶದ ಹೋಟೆಲ್‌ಗಳಲ್ಲಿ ತಂಗಿದ್ದರು ಎಂದು ಎನ್‌ಐಎ ಮಾಹಿತಿ ನೀಡಿದೆ. ಕಳೆದ ತಿಂಗಳು ಮಾರ್ಚ್ ೧ ರಂದು ಬೆಂಗಳೂರಿನ ರಾಮೇಶ್ವರಂ ಕೆಫೆಯಲ್ಲಿ ಸ್ಫೋಟ ಸಂಭವಿಸಿತ್ತು. ಈ ಪ್ರಕರಣದಲ್ಲಿ ಮೊಝಮ್ಮಿಲ್ ಷರೀಫ್ ಎಂಬಾತನನ್ನು ಎನ್‌ಐಎ ಈ ಹಿಂದೆ ಬಂಧಿಸಿತ್ತು. ಆತನಿಂದ ಇಬ್ಬರ ಹೆಸರುಗಳನ್ನು ಸಂಸ್ಥೆ ಪಡೆದುಕೊಂಡಿತ್ತು.

******

ಮ್ಯಾನ್ಮಾರ್‌ನಲ್ಲಿ, ವಿಶೇಷವಾಗಿ ರಾಖೀನ್‌ನಲ್ಲಿ ಭದ್ರತಾ ಪರಿಸ್ಥಿತಿ ಅನಿಶ್ಚಿತತೆಯಿಂದ ಕೂಡಿದೆ ಮತ್ತು ಕ್ಷೀಣಿಸುತ್ತಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ಹೇಳಿದೆ. ನವದೆಹಲಿಯಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಮ್ಯಾನ್ಮಾರ್‌ಗೆ ಭೇಟಿ ನೀಡುತ್ತಿರುವ ಪ್ರಯಾಣಿಕರು ಹೆಚ್ಚಿನ ಸುರಕ್ಷತಾ ಕ್ರಮಗಳನ್ನು ಅನುಸರಿಸಬೇಕು ಎಂದು ಹೇಳಿ, ತಮ್ಮ ಸಿಬ್ಬಂದಿಯನ್ನು ಸಿಟ್ವೆ ಕಾನ್ಸುಲೇಟ್ ನಿಂದ ಯಾಂಗಾನ್‌ಗೆ ಸ್ಥಳಾಂತರಿಸಿರುವುದಾಗಿ ತಿಳಿಸಿದರು.

******

ಕರ್ನಾಟಕದಲ್ಲಿ ಇದೇ ೧೮ ಮತ್ತು ೧೯ರಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ಇಂಜಿನಿಯರಿಂಗ್, ವೈದ್ಯಕೀಯ, ಕೃಷಿ ಮತ್ತು ಇನ್ನಿತರ ವೃತ್ತಿಪರ ಕೋರ್ಸ್‌ಗಳಿಗಾಗಿ ಸಾಮಾನ್ಯ ಪ್ರವೇಶ ಪರೀಕ್ಷೆ-ಸಿಇಟಿ ನಡೆಯಲಿದೆ. ಪರೀಕ್ಷೆಗಳು ಸುಗಮ ಮತ್ತು ಪಾರದರ್ಶಕವಾಗಿ ನಡೆಯುವಂತೆ

ಎಲ್ಲಾ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ವಹಿಸುವಂತೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದ್ದಾರೆ. ಪರೀಕ್ಷಾ ಕೇಂದ್ರದೊಳಗೆ ಕಟ್ಟುನಿಟ್ಟಿನ ವಸ್ತ್ರ ಸಂಹಿತೆ ಪಾಲಿಸುವಂತೆ ಸೂಚಿಸಲಾಗಿದೆ. ವಿದ್ಯಾರ್ಥಿಗಳು ಯಾವುದೇ ರೀತಿಯ ಕೈಗಡಿಯಾರ ಧರಿಸಿರಬಾರದು, ಕಿವಿ ಹಾಗೂ ತಲೆ ಮುಚ್ಚದಂತೆ ವಸ್ತ್ರವನ್ನು ಧರಿಸಿರಬೇಕು. ಉದ್ದ ತೋಳಿದ್ದರೆ ಮಡಚಬೇಕು. ಯಾವುದೇ ರೀತಿಯ ಎಲೆಕ್ಟ್ರಾನಿಕ್ ಉಪಕರಣಗಳನ್ನು ತೆಗೆದುಕೊಂಡು ಹೋಗುವಂತಿಲ್ಲ. ಯಾವುದೇ ರೀತಿಯ ಆಭರಣಗಳನ್ನು ಧರಿಸುವಂತಿಲ್ಲ, ಶೂ ಗಳನ್ನು ಧರಿಸುವಂತಿಲ್ಲ. ಈ ಬಗ್ಗೆ ಕೊಠಡಿ ಮೇಲ್ವಿಚಾರಕರು ಕಟ್ಟುನಿಟ್ಟಿನ ತಪಾಸಣೆ ನಡೆಸಬೇಕು ಎಂದು ಸೂಚನೆ ನೀಡಲಾಗಿದೆ.

******

ಬೇಸಿಗೆ ರಜೆ ಆರಂಭವಾಗುತ್ತಿದ್ದಂತೆಯೇ, ಪ್ರಯಾಣಿಕರ ದಟ್ಟಣೆ ಹೆಚ್ಚಾಗಿ, ಕೊಂಕಣ್ ಮಾರ್ಗದಲ್ಲಿ ರೈಲುಗಳಿಗಾಗಿ ಬೇಡಿಕೆ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ, ಸೆಂಟ್ರಲ್ ರೈಲ್ವೇ ಮುಂಬೈನ ಲೋಕಮಾನ್ಯ ತಿಲಕ್ ಟರ್ಮಿನಸ್ ಮತ್ತು ತಿವಿ ನಡುವೆ ಹೆಚ್ಚುವರಿಯಾಗಿ ೩೨ ವಿಶೇಷ ರೈಲು ಸೇವೆಗಳನ್ನು ಒದಗಿಸಲು ನಿರ್ಧರಿಸಿದೆ. ವಿಶೇಷ ರೈಲುಗಳ ವಿವರವಾದ ವೇಳಾ ಪಟ್ಟಿಗಾಗಿ ಪ್ರಯಾಣಿಕರು www.enquiry.indianrail.gov.in ಜಾಲತಾಣಕ್ಕೆ ಭೇಟಿ ನೀಡಬಹುದು ಅಥವಾ NTES ಆಪ್ ಡೌನ್ಲೋಡ್ ಮಾಡಿಕೊಳ್ಳಬಹುದು.

******

ಲಖನೌನಲ್ಲಿ ನಿನ್ನೆ ರಾತ್ರಿ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಟೂರ್ನಿಯ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ತಂಡ ೬ ವಿಕೆಟ್‌ಗಳಿಂದ ಲಖನೌ ಸೂಪರ್ ಜೈಂಟ್ಸ್ ತಂಡದ ವಿರುದ್ಧ ಜಯಗಳಿಸಿತು. ಮೊದಲು ಬ್ಯಾಟ್ ಮಾಡಿದ ಲಖನೌ ಸೂಪರ್ ಜೈಂಟ್ಸ್ ೭ ವಿಕೆಟ್ ನಷ್ಟಕ್ಕೆ ೧೬೭ ರನ್ ಗಳಿಸಿತು. ಕೆಳ ಕ್ರಮಾಂಕದ ಆಟಗಾರ ಆಯುಷ್ ಬದೋನಿ ೫೫ ರನ್ ಗಳಿಸಿ, ತಂಡಕ್ಕೆ ನೆರವಾದರು. ಉತ್ತರವಾಗಿ ೧೬೮ ರನ್‌ಗಳ ಗುರಿ ಬೆನ್ನತ್ತಿದ ಡೆಲ್ಲಿ ಕ್ಯಾಪಿಟಲ್ಸ್ ೧೮.೧ ಓವರ್‌ಗಳಲ್ಲಿ ೪ ವಿಕೆಟ್ ನಷ್ಟಕ್ಕೆ ೧೭೦ ರನ್ ಗಳಿಸಿ, ವಿಜಯೋತ್ಸವ ಆಚರಿಸಿತು. ಮುಲ್ಲಾನ್‌ಪುರದಲ್ಲಿ ಇಂದು ರಾತ್ರಿ ೭.೩೦ಕ್ಕೆ ನಡೆಯಲಿರುವ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ಮತ್ತು ರಾಜಸ್ತಾನ್ ರಾಯಲ್ಸ್ ತಂಡಗಳು ಮುಖಾಮುಖಿಯಾಗಲಿವೆ.

***END***